ಪಿ.ಡಬ್ಲ್ಯೂ- 1

**ದಿನಾಂಕಃ 20-07-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಶ್ರೀ ಎಸ್ ಯು ಜಿ ವಾದಿ ಪರ ವಕೀಲರಿಂದಃ**

ಈ ದಾವೆಯಲ್ಲಿ ನಾನು ಶ್ರೀ ಸಾಯಿ ಟ್ರೇಡರ್ಸನ ಪ್ರೊಪ್ರೈಟರ ಆಗಿದ್ದು, ಈ ದಿನ ನಾನು ನ್ಯಾಯಾಲಯದಲ್ಲಿ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿವೆ ಹಾಗೂ ಅದರಲ್ಲಿರುವ ಸಹಿಗಳು ನನ್ನವೇ ಆಗಿರುತ್ತವೆ.

ಈ ದಾವೆಯಲ್ಲಿ ಹಾಜರುಪಡಿಸಿರುವ ದಾಖಲೆಗಳನ್ನು ನೋಡಿದರೆ ಗುರುತಿಸುತ್ತೇನೆ.

ದಿನಾಂಕಃ 31-03-2018 ರ ಲೈಸೆನ್ಸನ್ನು ಹಾಜರುಪಡಿಸಿದ್ದು ಅದನ್ನು **ನಿಪಿ-1** ಎಂದು , ಬಿಲ್ಲ ನಂ. 246 ರ ಕಾರ್ಬನ ಪ್ರತಿಯನ್ನು **ನಿಪಿ-2** ಎಂದು, ದಿನಾಂಕಃ 14-02-2025 ರಂದು ಪ್ರತಿವಾದಿಗೆ ವಕೀಲರ ಮೂಲಕ ಕಳುಹಿಸಿದ ಲೀಗಲ್ ನೋಟಿಸನ ಕಛೇರಿ ಪ್ರತಿಯನ್ನು **ನಿಪಿ-3** ಎಂದು, ಸದರಿ ನೋಟಿಸ ಕಳುಹಿಸಿದ ಬಗ್ಗೆ ಅಂಚೆ ರಸೀದಿಯನ್ನು **ನಿಪಿ-4** ಎಂದು, ಸದರಿ ನೋಟಿಸನ್ನು ಪ್ರತಿವಾದಿಯು ತೆಗೆದುಕೊಳ್ಳದೇ ಹಿಂತಿರುಗಿದ ಬಗ್ಗೆ ಅಂಚೆ ಲಕೋಟೆಯನ್ನು **ನಿಪಿ-5** ಎಂದು, ಸದರಿ ಅಂಚೆ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ತೆರೆಯಲಾಗಿಯಿತು ಅದರಲ್ಲಿದ್ದ ನೋಟಿಸನ ಪ್ರತಿಯನ್ನು **ನಿಪಿ-5(ಎ)** ಎಂದು ಗುರುತಿಸಲಾಯಿತು.

(ವಾದಿಯರ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದು, ನೀಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸರಿ ಇದೆ.

-ಸಹಿ-

1 ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ. ಹಾವೇರಿ.